# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# Karnataka Examinations Authority


No. ED/KEA/ADMN/CR-02/2025 Date: 09-07-2025

**ಮೊದಲನೇ ಸುತ್ತಿನ ಸೀಟು ಹಂಚಿಕೆಗೆ options ಗಳನ್ನು ದಾಖಲಿಸುವ ಕುರಿತು ಮಾಹಿತಿ – ಯುಜಿಸಿಇಟಿ-2025**

ಇಂಜಿನಿಯರಿಂಗ್, ಪಶು ವೈದ್ಯಕೀಯ ಮತ್ತು ಪಶುಸಂಗೋಪನೆ, ಕೃಷಿ ವಿಜ್ಞಾನ, ಬಿ.ಪಿ.ಟಿ, ಅಲೈಡ್ ಹೆಲ್ತ್ ಸೈನ್ಸ್ ಕೋರ್ಸುಗಳಿಗೆ ಸರ್ಕಾರ / ಯೂನಿವರ್ಸಿಟಿ / ಇಲಾಖೆಗಳು ನೀಡಿರುವ ಸೀಟ್ ಮ್ಯಾಟ್ರಿಕ್ಸ್ ಅನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ.

ಇಂಜಿನಿಯರಿಂಗ್, ವೆಟರಿನರಿ, ಕೃಷಿವಿಜ್ಞಾನ ಕೋರ್ಸುಗಳಿಗೆ options ಗಳನ್ನು ದಾಖಲಿಸಲು **08-07-2025** ರಿಂದ ಪ್ರಕ್ರಿಯೆ ಪ್ರಾರಂಭಿಸಲಾಗಿದೆ. ಪ್ರಕಟಿಸಲಾದ ಸೀಟ್ ಮ್ಯಾಟ್ರಿಕ್ಸ್ ಅನ್ನು ಪರಿಶೀಲಿಸಿ ಇಚ್ಛೆ / ಆಯ್ಕೆಗಳನ್ನು ದಾಖಲಿಸುವ ಸಮಯದಲ್ಲಿ ಆದ್ಯತಾ ಕ್ರಮಗಳನ್ನು ಅನುಸರಿಸಲು ಸೂಚಿಸಿದೆ. options ಗಳನ್ನು ದಾಖಲಿಸುವ ಬಗ್ಗೆ, ಸೀಟು ಹಂಚಿಕೆಯ ವಿವಿಧ ಹಂತಗಳ ಕುರಿತು ವಿವರವಾದ ಮಾಹಿತಿಗಾಗಿ ಅಭ್ಯರ್ಥಿಗಳು ಯುಜಿಸಿಇಟಿ-2025 ರ ಸೀಟು ಹಂಚಿಕೆಯ ಮಾಹಿತಿ ಪುಸ್ತಕದಲ್ಲಿ ನೀಡಿರುವ ಸೂಚನೆಗಳನ್ನು ಓದಿಕೊಳ್ಳಬಹುದಾಗಿದೆ.

**ಗಮನಿಸಿ:** ಯಾವ ರೀತಿ options ಗಳನ್ನು ದಾಖಲಿಸುವುದು, ಪೂರ್ವ ಸಿದ್ಧತೆಗಳ ಕುರಿತಾದ ವಿಡಿಯೋವನ್ನು ಪ್ರಾಧಿಕಾರದ ವಿಕಸನ ಚಾನಲ್ ನಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ.

ವಿಶೇಷವಾಗಿ ಪಶು ವೈದ್ಯಕೀಯ ಮತ್ತು ಪಶುಸಂಗೋಪನೆ, ಕೃಷಿ ವಿಜ್ಞಾನ ಕೋರ್ಸುಗಳಲ್ಲಿ ಪ್ರಾಕ್ಟಿಕಲ್ ರ್‍ಯಾಂಕ್ ಪಡೆದಿರುವ ಅಭ್ಯರ್ಥಿಗಳು ಪ್ರಾಕ್ಟಿಕಲ್ ಸೀಟುಗಳಿಗೆ ಪ್ರತ್ಯೇಕವಾಗಿ ಮತ್ತು ರೆಗ್ಯುಲರ್ ಸೀಟುಗಳಿಗೆ ಪ್ರತ್ಯೇಕವಾಗಿ options ಗಳನ್ನು ದಾಖಲಿಸಬೇಕು. (ಹೆಚ್ಚಿನ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪಡೆಯಬಹುದು)

ಬಿ.ಎಸ್.ಸಿ. (ನರ್ಸಿಂಗ್), ಆರ್ಕಿಟೆಕ್ಚರ್, ಯೋಗ ಮತ್ತು ನ್ಯಾಚುರೋಪತಿ, ವೈದ್ಯಕೀಯ, ದಂತವೈದ್ಯಕೀಯ, ಆಯುರ್ವೇದ, ಹೋಮಿಯೋಪತಿ, ಯುನಾನಿ, ಫಾರ್ಮಸಿ ಕೋರ್ಸುಗಳಿಗೆ ಸೀಟ್ ಮ್ಯಾಟ್ರಿಕ್ಸ್ ಅನ್ನು ಸಂಬಂಧಿಸಿದ ಇಲಾಖೆಗಳು ನೀಡಿರುವುದಿಲ್ಲ. ಸದರಿ ಕೋರ್ಸುಗಳಿಗೆ ಸೀಟ್ ಮ್ಯಾಟ್ರಿಕ್ಸ್ ಸ್ವೀಕೃತವಾದ ನಂತರ options ಪೋರ್ಟಲ್ ಅನ್ನು ತೆರೆಯಲಾಗುವುದು.

**ವೈದ್ಯಕೀಯ, ದಂತವೈದ್ಯಕೀಯ, ಆಯುರ್ವೇದ, ಹೋಮಿಯೋಪತಿ, ಯುನಾನಿ ಕೋರ್ಸುಗಳ ಬಗ್ಗೆ:**

ರಾಷ್ಟ್ರೀಯ ವೈದ್ಯಕೀಯ ಮಂಡಳಿ ಮತ್ತು ಮೆಡಿಕಲ್ ಕೌನ್ಸಿಲಿಂಗ್ ಕಮಿಟಿ ನವದೆಹಲಿ ಹಾಗು ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ರವರು ಕಾಲ ಕಾಲಕ್ಕೆ ಹೊರಡಿಸುವ ಸೂಚನೆಗಳು / ಅಧಿಸೂಚನೆಗಳ ಅನ್ವಯ ವೈದ್ಯಕೀಯ, ದಂತವೈದ್ಯಕೀಯ, ಆಯುರ್ವೇದ, ಹೋಮಿಯೋಪತಿ, ಯುನಾನಿ ಕೋರ್ಸುಗಳಿಗೆ ಪ್ರವೇಶ ಪ್ರಕ್ರಿಯೆಯನ್ನು ನಡೆಸಲಾಗುತ್ತದೆ; ಅದರಂತೆ ವೈದ್ಯಕೀಯ ಮತ್ತು ದಂತ ವೈದ್ಯಕ್ಯೀಯ ಕೋರ್ಸುಗಳಿಗೆ options ಗಳನ್ನು ಸೇರಿಸುವ ಬಗ್ಗೆ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುತ್ತದೆ.

ಕಾರ್ಯನಿರ್ವಾಹಕ ನಿರ್ದೇಶಕರು


**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**

18th Cross, Sampige Road, Malleshwaram, Bengaluru - 560 012.

Phone: 080 - 23 564 583 Helpline : 080 - 23 460 460.

e-mail : keauthority-ka@nic.in Website : http://kea.kar.nic.in